ಇಲಾಖೆ / ವಿಷಯ : DEPARTMENT / SUBJECT: [illegible]

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE : 6/3/2021

# ಮಹಿಳಾ ಬಜೆಟ್, ಸಿಎಂ ವಿಶ್ವಾಸ

ವಿಕ ಸುದ್ದಿಲೋಕ ಬೆಂಗಳೂರು

ಅಂತಾರಾಷ್ಟ್ರೀಯ ಮಹಿಳಾ ದಿನವೇ ಬಜೆಟ್ ಮಂಡಿಸುತ್ತಿರುವ ಹಿನ್ನೆಲೆಯಲ್ಲಿ ಮಹಿಳಾ ಪರ ಬಜೆಟ್ ಮಂಡಿಸುವುದಾಗಿ ಸಿಎಂ ಬಿಎಸ್ ಯಡಿಯೂರಪ್ಪ ಹೇಳಿದ್ದಾರೆ.

ನಗರದಲ್ಲಿ ಶುಕ್ರವಾರ ಮಾಧ್ಯಮ ಪ್ರತಿನಿಧಿಗಳೊಂದಿಗೆ ಸಂವಾದ ನಡೆಸಿದ ಸಿಎಂ "ಕೊರೊನಾ ನಂತರ ಆರ್ಥಿಕ ಸ್ಥಿತಿಗತಿ ಸುಧಾರಿಸಿದೆ. ಕಳೆದ ವರ್ಷಕ್ಕಿಂತ ಪ್ರಸ್ತುತ ಬಜೆಟ್ ಗಾತ್ರ ದೊಡ್ಡದಿರುತ್ತದೆ. ಸದ್ಯದ ಆರ್ಥಿಕ ಪರಿಸ್ಥಿತಿಯ ಮಿತಿಯಲ್ಲೇ ಯೋಜನೆಗಳನ್ನು ಘೋಷಿಸಲಾಗುವುದು. ಮಹಿಳೆಯರ ಸ್ವಾವಲಂಬನೆಗಾಗಿ ಪ್ರಸ್ತುತ ಜಾರಿಯಲ್ಲಿರುವ ಯೋಜನೆಗಳ ಜತೆಗೆ ವಿಶೇಷ ಯೋಜನೆಗಳನ್ನು ಪ್ರಕಟಿಸಲಾಗುವುದು" ಎಂದು ಮಾಹಿತಿ ನೀಡಿದರು.

ಬಜೆಟ್‌ನಲ್ಲಿ ಗ್ರಾಮೀಣ ಪ್ರದೇಶದ ಮಹಿಳೆಯರ ಸಮಗ್ರ ಅಭಿವೃದ್ಧಿಗಾಗಿ ಶೇ.1ರ ಬಡ್ಡಿ ದರದಲ್ಲಿ 2 ಲಕ್ಷ ರೂ. ನೀಡುವ ಕಿರು ಸಾಲ ಯೋಜನೆಯನ್ನು 3-5 ಲಕ್ಷಕ್ಕೆ ಹೆಚ್ಚಿಸಬೇಕು ಎಂಬ ಒತ್ತಾಯವಿದೆ. ಸ್ತ್ರೀ ಶಕ್ತಿ ಗುಂಪುಗಳಿಗಾಗಿ ಆರ್ಥಿಕ ಘಟಕ ಸ್ಥಾಪನೆ, ಮಹಿಳೆಯರಿಗಾಗಿ ಸಣ್ಣ ಉದ್ದಿಮೆ ಸ್ಥಾಪನೆ ಮತ್ತು ಕಿರು ಸಾಲ ಯೋಜನೆ ಮಿತಿ ಹೆಚ್ಚಿಸುವ ನಿರೀಕ್ಷೆ ಇದೆ. ಅದೇ ರೀತಿ ಆರ್ಥಿಕವಾಗಿ ಹಿಂದುಳಿದ ಮಹಿಳೆಯರು, ವಿಧವೆಯರು, ನಿರ್ಗತಿಕ, ವಿಕಲಚೇತನ ಮಹಿಳೆಯರಿಗೆ ವಿಶೇಷ ಒತ್ತು ನೀಡುವ ಸಾಧ್ಯತೆಯಿದೆ.

ಕೌಶಲ ತರಬೇತಿ, ಉದ್ಯಮಶೀಲತೆ ಅಭಿವೃದ್ಧಿ, ಸಣ್ಣ ಉದ್ಯಮ ಸ್ಥಾಪನೆಗೆ ಉತ್ತೇಜನ, ಸಾಮಾನ್ಯ ಲೆಕ್ಕಪತ್ರ ನಿರ್ವಹಣೆ, ಕಚ್ಚಾ ಸಾಮಗ್ರಿಗಳ ನಿರ್ವಹಣೆ, ಮಾರುಕಟ್ಟೆ, ಡಿಸೈನಿಂಗ್, ಗಾರ್ಮೆಂಟ್ಸ್, ಪ್ರಿಂಟಿಂಗ್, ಆತಿಥ್ಯ ಉದ್ಯಮ, ಆಹಾರ ಸಂಸ್ಕರಣೆ, ಬ್ಯಾಗ್ ತಯಾರಿಕೆ, ಕಸೂತಿ ಸೇರಿದಂತೆ ಗ್ರಾಮೀಣ ಭಾಗದ ಕರಕುಶಲ ಉದ್ಯಮಕ್ಕೂ ಈ ಬಜೆಟ್‌ನಲ್ಲಿ ವಿಶೇಷ ಕೊಡುಗೆ ಲಭಿಸಬಹುದು ಎಂದು ಊಹಿಸಲಾಗಿದೆ.

ಬೀದಿಬದಿ ಸಣ್ಣ ವ್ಯಾಪಾರ ನಡೆಸುತ್ತಿರುವ ಮಹಿಳೆಯರಿಗೆ ಅನುಷ್ಠಾನಗೊಳಿಸಿರುವ ಯೋಜನೆಗಳನ್ನು ಇನ್ನಷ್ಟು ಪರಿಣಾಮಕಾರಿಯಾಗಿಸುವ ನಿರೀಕ್ಷೆ ಇದೆ. ಮಹಿಳಾ ವ್ಯಾಪಾರಿಗಳು ಹೆಚ್ಚಿನ ಬಡ್ಡಿಗೆ ಸಾಲ ಪಡೆಯುವುದನ್ನು ತಡೆಗಟ್ಟಿ ಶೋಷಣೆಯಿಂದ ಮುಕ್ತಗೊಳಿಸುವ ಹಾಗೂ ನಿರುದ್ಯೋಗ ಸಮಸ್ಯೆ ನಿವಾರಣೆ ಮಾಡುವುದು ಈ ಯೋಜನೆಯ ಮುಖ್ಯ ಉದ್ದೇಶ. ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದಿಂದ ನೀಡಲಾಗುವ 10 ಸಾವಿರ ರೂ. ಸಹಾಯಧನದ ಮಿತಿ ಹೆಚ್ಚಿಸಬೇಕೆಂಬುದು ಮಹಿಳಾ ಬೀದಿಬದಿ ವ್ಯಾಪಾರಸ್ಥರ ಆಗ್ರಹವಾಗಿದ್ದು, ಅದಕ್ಕೂ ಮನ್ನಣೆ ದೊರೆಯುವ ಸಾಧ್ಯತೆಗಳಿವೆ. ಬಜೆಟ್‌ನಲ್ಲಿ ಪ್ರತಿ ಜಿಲ್ಲೆಗೂ ಒಂದೊಂದು ಅಭಿವೃದ್ಧಿ ಯೋಜನೆ ಪ್ರಕಟಿಸುವ ವಿಶ್ವಾಸವನ್ನು ಸಿಎಂ ವ್ಯಕ್ತಪಡಿಸಿದ್ದಾರೆ. ಇತ್ತೀಚೆಗೆ ವಿಕ ನಡೆಸಿದ ರಂಗಸಭೆಯ ಕಳಕಳಿಯೂ ಅದೇ ಆಗಿತ್ತು.

> ಬಜೆಟ್ ಪ್ರತಿಗಳನ್ನು ಮುದ್ರಣಕ್ಕೆ ಕಳಿಸಲಾಗಿದೆ. ಪ್ರತಿ ಜಿಲ್ಲೆಗೆ ಸಾಧ್ಯವಾದಷ್ಟು ಪ್ರಾತಿನಿಧ್ಯ ನೀಡಲಾಗಿದೆ. ಮಹಿಳಾ ಅಭಿವೃದ್ಧಿ ಯೋಜನೆಗಳಿಗೆ ಹೆಚ್ಚಿನ ಒತ್ತು ನೀಡಲಾಗುವುದು.
>
> -ಬಿಎಸ್ ಯಡಿಯೂರಪ್ಪ ಸಿಎಂ